
# ಮೂರು ತಿಂಗಳಲ್ಲಿ 120 ಹೊಸ ಬಸ್ ಸೇರ್ಪಡೆ: ಅರುಣಕುಮಾರ ಪಾಟೀಲ




**ಕಲಬುರಗಿ:** ಕಲ್ಯಾಣ ಕರ್ನಾಟಕ ಭಾಗದ ಸಾರ್ವಜನಿಕರಿಗೆ ಇನ್ನಷ್ಟು ಉತ್ತಮ, ಸುರಕ್ಷಿತ ಹಾಗೂ ಗುಣಮಟ್ಟದ ಸಾರಿಗೆ ಸೇವೆ ಒದಗಿಸುವ ಉದ್ದೇಶದಿಂದ ಕರ್ನಾಟಕ ಕಲ್ಯಾಣ ರಸ್ತೆ ಸಾರಿಗೆ ಸಂಸ್ಥೆ (ಕೆಕೆಆರ್‌ಟಿಸಿ) ತನ್ನ ಸಾರಿಗೆ ಜಾಲವನ್ನು ವಿಸ್ತರಿಸಲು ಕ್ರಮ ಕೈಗೊಂಡಿದ್ದು, ಸಂಸ್ಥೆಗೆ ಇನ್ನೂ ಸುಮಾರು 750 ಹೊಸ ಬಸ್‌ಗಳ ಅಗತ್ಯವಿದೆ ಎಂದು ಕೆಕೆಆರ್‌ಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ ಹೇಳಿದರು. ಈ ಕೊರತೆಯನ್ನು ಹಂತ ಹಂತವಾಗಿ ನೀಗಿಸುವ ನಿಟ್ಟಿನಲ್ಲಿ ಪ್ರಸ್ತುತ ಕೆಕೆಆರ್‌ಡಿಬಿ ಮಂಡಳಿಯ 45 ಕೋಟಿ ಅನುದಾನದಲ್ಲಿ 120 ಹೊಸ ಬಸ್‌ಗಳನ್ನು ಖರೀದಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ಬುಧವಾರ ಕಲಬುರಗಿ ಕೇಂದ್ರ ಬಸ್ ನಿಲ್ದಾಣದಲ್ಲಿ ಕಲಬುರಗಿ–ಮೈಸೂರು ನಾನ್ ಎಸಿ ಸ್ಲೀಪರ್ ಹಾಗೂ ಕಲಬುರಗಿ–ಶಿವಮೊಗ್ಗ ಎಸಿ ಸ್ಲೀಪರ್ (ಮಿನಿ ಕಲ್ಯಾಣರಥ) ನೂತನ ಬಸ್ ಸೇವೆಗಳಿಗೆ ಚಾಲನೆ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಸ್ಥೆಯ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ಹಂತ ಹಂತವಾಗಿ ಜಾರಿಗೊಳಿಸಲಾಗುತ್ತಿದೆ ಎಂದು ಹೇಳಿದರು.

120 ಹೊಸ ಬಸ್‌ಗಳ ಖರೀದಿಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆ ಈಗಾಗಲೇ ಪ್ರಗತಿಯಲ್ಲಿದ್ದು, ಮುಂದಿನ ಮೂರು ತಿಂಗಳೊಳಗೆ ಹೊಸ ವಾಹನಗಳು ಸಂಸ್ಥೆಗೆ ಸೇರ್ಪಡೆಯಾಗಲಿವೆ. ಹೊಸ ಬಸ್‌ಗಳು ರಸ್ತೆಗಿಳಿದ ಬಳಿಕ ಗ್ರಾಮೀಣ ಹಾಗೂ ನಗರ ಪ್ರದೇಶಗಳ ನಡುವೆ ಸಾರಿಗೆ ಸಂಪರ್ಕ ಮತ್ತಷ್ಟು ಬಲವಾಗಲಿದ್ದು, ಪ್ರಯಾಣಿಕರಿಗೆ ಅನುಕೂಲವಾಗಲಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಸ್ ಕೊರತೆ ನೀಗಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಹ ಸಕಾರಾತ್ಮಕ ಸ್ಪಂದನೆ ನೀಡಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಹೊಸ ಬಸ್‌ಗಳನ್ನು ಪಡೆಯುವ ವಿಶ್ವಾಸವಿದೆ ಎಂದು ತಿಳಿಸಿದರು.

ಸಂಸ್ಥೆಯ ಸ್ವಂತ ಅನುದಾನದಲ್ಲಿ ಖರೀದಿಸಿರುವ 56 ಹೊಸ ಬಸ್‌ಗಳ ಪೈಕಿ 12 ಬಸ್‌ಗಳನ್ನು ಕಲಬುರಗಿ, ವಿಜಯಪುರ ಹಾಗೂ ಬಳ್ಳಾರಿ ವಿಭಾಗಗಳಲ್ಲಿ ಪ್ರಾಯೋಗಿಕ ಸಂಚಾರಕ್ಕೆ (ಟ್ರಯಲ್ ರನ್) ಬಳಸಲಾಗುತ್ತಿದೆ. ಪ್ರಾಯೋಗಿಕ ಕಾರ್ಯಾಚರಣೆ ಯಶಸ್ವಿಯಾದ ಬಳಿಕ ಅವುಗಳನ್ನು ನಿಯಮಿತ ಸೇವೆಗೆ ನಿಯೋಜಿಸಲಾಗುವುದು ಎಂದು ಹೇಳಿದರು.

ಪ್ರಸ್ತುತ ಆರಂಭಿಸಲಾಗಿರುವ ಕಲಬುರಗಿ–ಮೈಸೂರು ಮಾರ್ಗದಲ್ಲಿ ಎರಡು ನಾನ್ ಎಸಿ ಸ್ಲೀಪರ್ ಬಸ್‌ಗಳು ಹಾಗೂ ಕಲಬುರಗಿ–ಶಿವಮೊಗ್ಗ ಮಾರ್ಗದಲ್ಲಿ ಎರಡು ಎಸಿ ಸ್ಲೀಪರ್ (ಮಿನಿ ಕಲ್ಯಾಣ–ರಥ) ಬಸ್‌ಗಳು ಕಾರ್ಯಾಚರಣೆ ಆರಂಭಿಸಿವೆ. ಈ ನೂತನ ಬಸ್‌ಗಳಲ್ಲಿ ಅತ್ಯಾಧುನಿಕ ಆಸನ ವ್ಯವಸ್ಥೆ, ಉತ್ತಮ ಸುರಕ್ಷತಾ ಸೌಲಭ್ಯಗಳು, ಆರಾಮದಾಯಕ ಮಲಗುವ ವ್ಯವಸ್ಥೆ ಹಾಗೂ ದೂರ ಪ್ರಯಾಣಕ್ಕೆ ಅನುಕೂಲಕರ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಇದ–ರಿಂದ ರಾತ್ರಿ ಪ್ರಯಾಣ ಮಾಡುವ ಪ್ರಯಾಣಿಕರಿಗೆ ಹೆಚ್ಚು ಸುರಕ್ಷಿತ ಮತ್ತು ಆರಾಮದಾಯಕ ಅನುಭವ ದೊರೆಯಲಿದೆ ಎಂದು ಹೇಳಿದರು.

ಕಲಬುರಗಿ ನಗರದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಹೊಸ ಬಸ್ ಶೆಲ್ಟರ್‌ಗಳ ನಿರ್ಮಾಣಕ್ಕೆ ಡಿಪಿಆರ್ (ವಿವರವಾದ ಯೋಜನಾ ವರದಿ) ಸಿದ್ಧಪಡಿಸಲಾಗುತ್ತಿದೆ. ಅಲ್ಲದೆ ಬಸ್‌ಗಳಲ್ಲಿ ಚಿಲ್ಲರೆ ಹಣದ ಸಮಸ್ಯೆಯನ್ನು ನಿವಾರಿಸಲು ಕ್ಯೂಆರ್ ಕೋಡ್ ಆಧಾರಿತ ಡಿಜಿಟಲ್ ಪಾವತಿ ವ್ಯವಸ್ಥೆ ಜಾ–ರಿಗೆ ತರಲಾಗಿದೆ. ಇದರಿಂದ ಪ್ರಯಾಣಿಕರು ಯುಪಿಐ ಸೇರಿದಂತೆ ಡಿಜಿಟಲ್ ವಿಧಾನಗಳ ಮೂಲಕ ಸುಲಭವಾಗಿ ಟಿಕೆಟ್ ಪಡೆಯಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಪರಿಸರ ಸ್ನೇಹಿ ಸಾರಿಗೆ ವ್ಯವಸ್ಥೆಗೆ ಒತ್ತು ನೀಡುವ ಉದ್ದೇಶದಿಂದ ಮುಂದಿನ ದಿನಗಳಲ್ಲಿ ಕಲಬುರಗಿ ವಿಭಾಗದಲ್ಲಿ 100 ಎಲೆಕ್ಟ್ರಿಕ್ ಬಸ್‌ಗಳು ಹಾಗೂ ವಿಜಯಪುರ–ಬಳ್ಳಾರಿ ವಿಭಾಗದಲ್ಲಿ ಇನ್ನೂ 100 ಎಲೆಕ್ಟ್ರಿಕ್ ಬಸ್‌ಗಳನ್ನು ಕಾರ್ಯಾಚರಣೆಗೆ ತರಲು ಯೋಜನೆ ರೂಪಿಸಲಾಗಿದೆ. ಇದರಿಂದ ಇಂಧನ ವೆಚ್ಚ ಕಡಿಮೆಯಾಗುವುದರ ಜೊತೆಗೆ ಪರಿಸರ ಮಾಲಿನ್ಯ ನಿಯಂತ್ರಣಕ್ಕೂ ಸಹಕಾ–ರಿಯಾಗಲಿದೆ ಎಂದು ಅಧ್ಯಕ್ಷ ಅರುಣಕುಮಾರ ಪಾಟೀಲ ಹೇಳಿದರು.

ನಾಲ್ಕು ದಿಕ್ಕಿನಲ್ಲಿ ಸ್ಯಾಟಲೈಟ್ ಬಸ್ ನಿಲ್ದಾಣ: ಕಲಬುರಗಿ ನಗರದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆ ಹಾಗೂ ಕೇಂದ್ರ ಬಸ್ ನಿಲ್ದಾಣದ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ನಗರದ ನಾಲ್ಕು ದಿಕ್ಕುಗಳಲ್ಲಿ ಸ್ಯಾಟಲೈಟ್ ಬಸ್ ನಿಲ್ದಾಣಗಳನ್ನು ನಿರ್ಮಿಸುವ ಯೋಜನೆ ರೂಪಿಸಲಾಗಿದೆ. ಈ ಯೋಜನೆ ಜಾರಿಯಾದ ಬಳಿಕ ಹೊರ ಜಿಲ್ಲೆಗಳ ಬಸ್‌ಗಳು ನಗರದೊಳಗೆ ಪ್ರವೇಶಿಸದೇ ಹೊರವಲಯದಲ್ಲೇ ಪ್ರಯಾಣಿಕರನ್ನು ಇಳಿಸಿ–ಏರಿಸುವ ವ್ಯವಸ್ಥೆ ರೂಪುಗೊಳ್ಳಲಿದ್ದು, ನಗರ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ನೆರವಾಗಲಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ, ಹೊಸ ಬಸ್ ಸೇವೆಗಳು ಸಾರ್ವಜನಿಕರಿಗೆ ಬಹಳ ಅನುಕೂಲವಾಗಲಿವೆ ಎಂದು ಹೇಳಿದರು. ಕಲಬುರಗಿ–ಮೈಸೂರು 667 ಕಿಲೋಮೀಟರ್ ದೂರದ ನಾನ್ ಎಸಿ ಸ್ಲೀಪರ್ ಪ್ರಯಾಣಕ್ಕೆ 1,262 ಹಾಗೂ ಕಲಬುರಗಿ–ಶಿವಮೊಗ್ಗ 547 ಕಿಲೋಮೀಟ–ರ್ ದೂರದ ಎಸಿ ಸ್ಲೀಪರ್ ಪ್ರಯಾಣಕ್ಕೆ 1,195 ಎಂಬ ಕೈಗೆಟಕುವ ದರ ನಿಗದಿಪಡಿಸಲಾಗಿದೆ. ಖಾಸಗಿ ವಾಹನಗಳಿಗೆ ಹೋಲಿಸಿದರೆ ಕಡಿಮೆ ವೆಚ್ಚದಲ್ಲಿ ಉತ್ತಮ ಗುಣಮಟ್ಟದ ಸೇವೆ ದೊರೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಈ ಸೇವೆಯ ಪ್ರಯೋಜನ ಪಡೆಯಬೇಕು ಎಂದು ಮನವಿ ಮಾಡಿದರು.

ಶಕ್ತಿ ಯೋಜನೆಯಿಂದ ಮಹಿಳೆಯರ ಸಂಚಾರ ಹೆಚ್ಚಳ: ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಸೋಮಶೇಖರ ಹಿರೇಮಠ ಮಾತನಾಡಿ, ರಾಜ್ಯ ಸರ್ಕಾರದ ಶಕ್ತಿ ಯೋಜನೆ ಜಾರಿಯಾದ ಬಳಿಕ ಮಹಿಳೆಯರ ಬಸ್ ಪ್ರಯಾಣ ಗಣನೀಯವಾಗಿ ಹೆಚ್ಚಾಗಿದೆ ಎಂದು ಹೇಳಿದರು. ಪ್ರಯಾಣಿಕರ ಸಂಖ್ಯೆ ಹೆಚ್ಚುತ್ತಿರುವುದನ್ನು ಮನಗಂಡು ಕೆಕೆಆರ್‌ಟಿಸಿ ಅಧ್ಯಕ್ಷ ಅರುಣಕುಮಾರ ಪಾಟೀಲ ಅವರು ಹೊಸ ಬಸ್‌ಗಳನ್ನು ಸೇರ್ಪಡೆಗೊಳಿಸಿ ಹೆಚ್ಚುವರಿ ಸೇವೆಗಳನ್ನು ಆರಂಭಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನೂತನ ಬಸ್‌ಗಳ ವೇಳಾಪಟ್ಟಿ: ಕಲಬುರಗಿ–ಮೈಸೂರು ನಾನ್ ಎಸಿ ಸ್ಲೀಪರ್ ಬಸ್ ಪ್ರತಿದಿನ ಸಂಜೆ 6.00 ಗಂಟೆಗೆ ಕಲಬುರಗಿ ಕೇಂದ್ರ ಬಸ್ ನಿಲ್ದಾಣದಿಂದ ಹೊರಟು ಶಹಾಪುರ, ಲಿಂಗಸೂರು, ಸಿಂಧನೂರು, ಬಳ್ಳಾರಿ, ಚಳ್ಳಕೆರೆ, ಹಿರಿಯೂರು ಹಾಗೂ ತುರುವೇಕೆರೆ ಮಾರ್ಗವಾಗಿ ಮರುದಿನ ಬೆಳಗ್ಗೆ 8.00 ಗಂಟೆಗೆ ಮೈಸೂರು ತಲುಪಲಿದೆ. ಇದೇ ಮಾರ್ಗದಲ್ಲಿ ಮೈಸೂರಿನಿಂದ ಸಂಜೆ 7.00 ಗಂಟೆಗೆ ಹೊರಡುವ ಬಸ್ ಮರುದಿನ ಬೆಳಗ್ಗೆ 9.00 ಗಂಟೆಗೆ ಕಲಬುರಗಿ ತಲುಪಲಿದೆ.

ಕಲಬುರಗಿ–ಶಿವಮೊಗ್ಗ ಎಸಿ ಸ್ಲೀಪರ್ (ಮಿನಿ ಕಲ್ಯಾಣರಥ) ಬಸ್ ರಾತ್ರಿ 8.30 ಗಂಟೆಗೆ ಕಲಬುರಗಿಯಿಂದ ಹೊರಟು ಶಹಾಪುರ, ಲಿಂಗಸೂರು, ಸಿಂಧನೂರು, ಗಂಗಾವತಿ, ಹೊಸಪೇಟೆ, ಕುಡ್ಲಗಿ, ಚಿತ್ರದುರ್ಗ ಹಾಗೂ ಚನ್ನಗಿರಿ ಮಾರ್ಗವಾಗಿ ಮರುದಿನ ಬೆಳಗ್ಗೆ 7.15 ಗಂಟೆಗೆ ಶಿವಮೊಗ್ಗ ತಲುಪಲಿದೆ. ಶಿವಮೊಗ್ಗದಿಂದ ಸಂಜೆ 7.00 ಗಂಟೆಗೆ ಹೊರಡುವ ಬಸ್ ಮರುದಿನ ಬೆಳಗ್ಗೆ 5.45 ಗಂಟೆಗೆ ಕಲಬುರಗಿ ಕೇಂದ್ರ ಬಸ್ ನಿಲ್ದಾಣಕ್ಕೆ ಆಗಮಿಸಲಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ವಿಜಯ ಕುಮಾರ್ ಕಟ್ಟಿಮನಿ, ನಿರ್ಮಲಾ ಬರ್ಗಲಿ, ಸುರೇಶ್ ತಿಬ್ಬಶೆಟ್ಟಿ, ಕೆಕೆಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ. ಸುಶೀಲಾ, ಮುಖ್ಯ ಸಂಚಾರ ವ್ಯವಸ್ಥಾಪಕ ಸಂತೋಷ ಕುಮಾರ, ಮುಖ್ಯ ಭದ್ರತಾ ಅಧಿಕಾರಿ ಎಸ್.ಡಿ. ಗುರಿಕಾರ್, ಸಿಎಂಇ ಸಂತೋಷ ಗೋಗೇರಿ, ಮುಖ್ಯ ಹಣಕಾಸು ಅಧಿಕಾರಿ ಬಸವರಾಜ ಬೆಳಗಲಿ, ಮಂಡಳಿ ಕಾರ್ಯದರ್ಶಿ ಜಗದೀಶ ನಾಯಕ್, ಕಲಬುರಗಿ ವಿಭಾಗ–1ರ ವಿಭಾಗೀಯ ನಿಯಂತ್ರಣಾಧಿಕಾರಿ ಗಂಗಾಧರ ಎಸ್.ಜಿ., ವಿಭಾಗ–2ರ ವಿಭಾಗೀಯ ನಿಯಂತ್ರಣಾಧಿಕಾರಿ ಬಸವಂತಪ್ಪ, ಡಿಟಿಒ ಈಶ್ವರ ಹೊಸಮನಿ, ವಿವಿಧ ಡಿಪೋ ವ್ಯವಸ್ಥಾಪಕರು, ಬಸ್ ನಿಲ್ದಾಣದ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು. ಹೊಸ ಬಸ್ ಸೇವೆಗಳ ಆರಂಭದಿಂದ ಕಲ್ಯಾಣ ಕರ್ನಾಟಕ ಭಾಗದ ಸಾರಿಗೆ ವ್ಯವಸ್ಥೆಗೆ ಮತ್ತಷ್ಟು ಬಲ ಸಿಗಲಿದ್ದು, ದೂರ ಪ್ರಯಾಣಿಕರಿಗೆ ಹೆಚ್ಚು ಆರಾಮದಾಯಕ ಹಾಗೂ ಗುಣಮಟ್ಟದ ಸೇವೆ ದೊರೆಯುವ ನಿರೀಕ್ಷೆ ವ್ಯಕ್ತವಾಗಿದೆ.

## ರೈಲು ನಿಲ್ದಾಣದಲ್ಲಿ 9 ಲಕ್ಷ ರೂ. ಮೌಲ್ಯದ 19 ಕೆಜಿ ಗಾಂಜಾ ಜಪ್ತಿ



**ಗದಗ:** ಗೋವಾ ಕಡೆಗೆ ಸಂಚರಿಸುತ್ತಿದ್ದ ಶಾಲಿಮಾರ–ವಾಸ್ಕೋ ಎಕ್ಸ್‌ಪ್ರೆಸ್ ರೈಲಿನಲ್ಲಿ ಅಪಾರ ಪ್ರಮಾಣದ ಗಾಂಜಾ ಪತ್ತೆಯಾಗಿದ್ದು, ಗದಗ ರೈಲ್ವೆ ಪೊಲೀಸರು ಸುಮಾರು 9.56 ಲಕ್ಷ ಮೌಲ್ಯದ 19.300 ಕೆಜಿ ಗಾಂಜಾವನ್ನು ವಶಪಡಿಸಿಕೊಂಡಿದ್ದಾರೆ. ರೈಲ್ವೆ ಪೊಲೀಸ್ ಸಿಬ್ಬಂದಿಯ ನಿಯಮಿತ ತಪಾಸಣೆ ವೇಳೆ ಈ ಮಾದಕ ವಸ್ತು ಪತ್ತೆಯಾಗಿದ್ದು, ಗಾಂಜಾವನ್ನು ಯಾರು ಸಾಗಿಸುತ್ತಿದ್ದರು ಹಾಗೂ ಯಾವ ಸ್ಥಳದಿಂದ ಯಾವ ಸ್ಥಳಕ್ಕೆ ಕೊಂಡೊಯ್ಯಲಾಗುತ್ತಿತ್ತು ಎಂಬ ಕುರಿತು ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಬೆಳಿಗ್ಗೆ 8.06 ಗಂಟೆ ಸುಮಾರಿಗೆ, ಶಾಲಿಮಾರದಿಂದ ವಾಸ್ಕೋಗೆ ತೆರಳುತ್ತಿದ್ದ ಶಾಲಿಮಾರ–ವಾಸ್ಕೋ ಎಕ್ಸ್‌ಪ್ರೆಸ್ ರೈಲು ಗದಗ ರೈಲು ನಿಲ್ದಾಣಕ್ಕೆ ಆಗಮಿಸಿದ ವೇಳೆ, ರೈಲ್ವೆ ಪೊಲೀಸ್ ಠಾಣೆಯ ಸಿಬ್ಬಂದಿ ಎಂದಿನಂತೆ ಮಾದಕ ವಸ್ತುಗಳ ಪತ್ತೆ, ಅನುಮಾನಾಸ್ಪದ ವಸ್ತುಗಳ ಪರಿಶೀಲನೆ ಹಾಗೂ ಭದ್ರತಾ ತಪಾಸಣೆ ನಡೆಸುತ್ತಿದ್ದರು. ಈ ವೇಳೆ ರೈಲಿನ ಇಂಜಿನ್ ಹಿಂಭಾಗದಲ್ಲಿದ್ದ ಜನರಲ್ ಕೋಚ್‌ನ ಶೌಚಾಲಯದ ಸಮೀಪ ಎರಡು ಬಿಳಿ ಬಣ್ಣದ ಅನುಮಾನಾಸ್ಪದ ಚೀಲಗಳು ಕಂಡುಬಂದವು.

ಚೀಲಗಳು ದೀರ್ಘಕಾಲದಿಂದ ಯಾರೂ ಗಮನಿಸದಂತೆ ಬಿದ್ದಿರುವುದನ್ನು ಕಂಡ ಪೊಲೀಸರು ತಕ್ಷಣವೇ ಪ್ರಯಾಣಿಕರನ್ನು ವಿಚಾರಣೆ ನಡೆಸಿದರು. "ಈ ಚೀಲಗಳು ಯಾರದ್ದು?" ಎಂದು ಹಲವು ಬಾರಿ ಕೇಳಿದರೂ ಯಾವುದೇ ಪ್ರಯಾಣಿಕರು ತಮ್ಮದು ಎಂದು ಮುಂದೆ ಬರಲಿಲ್ಲ. ಇದರಿಂದ ಅನುಮಾನಗೊಂಡ ರೈಲ್ವೆ ಪೊಲೀಸರು ಭದ್ರತಾ ಕ್ರಮವಾಗಿ ಎರಡೂ ಚೀಲಗಳನ್ನು ರೈಲಿನಿಂದ ಕೆಳಗಿಳಿಸಿ ಸೂಕ್ಷ್ಮವಾಗಿ ಪರಿಶೀಲನೆ ನಡೆಸಿದರು.

ಪರಿಶೀಲನೆ ವೇಳೆ ಚೀಲಗಳಲ್ಲಿ ಮಾದಕ ವಸ್ತುವಾದ ಗಾಂಜಾ ಇರುವುದನ್ನು ಕಂಡು ಅಧಿಕಾರಿಗಳು ತಕ್ಷಣವೇ ವಶಕ್ಕೆ ಪಡೆದರು. ಬಳಿಕ ತೂಕ ಮತ್ತು ಮೌಲ್ಯವನ್ನು ಪರಿಶೀಲಿಸಿದಾಗ, ಒಂದು ಚೀಲದಲ್ಲಿ 11.700 ಕೆಜಿ ಗಾಂಜಾ ಇದ್ದು, ಅದರ ಅಂದಾಜು ಮೌಲ್ಯ 5.64 ಲಕ್ಷ ಎಂದು ತಿಳಿದುಬಂದಿತು. ಮತ್ತೊಂದು ಚೀಲದಲ್ಲಿ 7.600 ಕೆಜಿ ಗಾಂಜಾ ಪತ್ತೆಯಾಗಿದ್ದು, ಅದರ ಮೌಲ್ಯ ಸುಮಾರು 3.92 ಲಕ್ಷ ಎಂದು ಅಂದಾಜಿಸಲಾಗಿದೆ.

ಹೀಗೆ ಎರಡೂ ಚೀಲಗಳಿಂದ ಒಟ್ಟು 19.300 ಕೆಜಿ ಗಾಂಜಾ, ಅಂದಾಜು 9.56 ಲಕ್ಷ ಮೌಲ್ಯದ ಮಾದಕ ವಸ್ತುವನ್ನು ರೈಲ್ವೆ ಪೊಲೀಸರು ವಶಪಡಿಸಿಕೊಂಡಿದ್ದಾರೆ. ಇಷ್ಟೊಂದು ಪ್ರಮಾಣದ ಗಾಂಜಾವನ್ನು ರೈಲಿನ ಮೂಲಕ ಸಾಗಿಸಲು ಯತ್ನಿಸಿರುವುದು ಮಾದಕ ವಸ್ತು ಸಾಗಣೆ ಜಾಲದ ಚಟುವಟಿಕೆಗಳ ಬಗ್ಗೆ ಅನುಮಾನ ಮೂಡಿಸಿದ್ದು, ಪ್ರಕರಣವನ್ನು ಪೊಲೀಸರು ಗಂಭೀರವಾಗಿ ಪರಿಗಣಿಸಿದ್ದಾರೆ.

ಪ್ರಾಥಮಿಕ ತನಿಖೆಯಲ್ಲಿ ಚೀಲಗಳ ಮಾಲೀಕರ ಬಗ್ಗೆ ಯಾವುದೇ ಸುಳಿವು ಲಭ್ಯವಾಗಿಲ್ಲ. ಗಾಂಜಾವನ್ನು ಯಾವ ರಾಜ್ಯದಿಂದ ತರಲಾಗುತ್ತಿತ್ತು, ಅಂತಿಮವಾಗಿ ಯಾವ ಸ್ಥಳಕ್ಕೆ ಸಾಗಿಸಲಾಗುತ್ತಿತ್ತು ಹಾಗೂ ಇದರ ಹಿಂದೆ ಇರುವ ವ್ಯಕ್ತಿಗಳು ಅಥವಾ ಜಾಲ ಯಾವುದು ಎಂಬ ಕುರಿತು ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ನಡೆಸುತ್ತಿದ್ದಾರೆ. ರೈಲಿನಲ್ಲಿ ಪ್ರಯಾಣಿಸಿದ ಪ್ರಯಾಣಿಕರ ಮಾಹಿತಿ, ರೈಲು ನಿಲ್ದಾಣಗಳ ಸಿಸಿಟಿವಿ ದೃಶ್ಯಾವಳಿ ಹಾಗೂ ಇತರೆ ತಾಂತ್ರಿಕ ಮಾಹಿತಿಗಳನ್ನು ಆಧರಿಸಿ ತನಿಖೆ ಮುಂದುವರಿದಿದೆ.

## ರೈತರ ಹೊಲಗಳಿಗೆ ಅಧಿಕಾರಿಗಳೊಂದಿಗೆ ಡಿಸಿ ಭೇಟಿ



**ದೇವರಹಿಪ್ಪರಗಿ:** ಈ ವರ್ಷ ಮುಂಗಾರು ಸಂಪೂರ್ಣ ಕೈಕೊಟ್ಟ ಪರಿಣಾಮ ವಿಜಯಪುರ ಜಿಲ್ಲೆಯಲ್ಲಿ ಬರದ ಛಾಯೆ ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಕಾಲಕ್ಕೆ ಮಳೆಯಾಗದ ಕಾರಣ ಹೊಲಗಳಲ್ಲಿ ಬಿತ್ತನೆ ಕಾರ್ಯ ಸ್ಥಗಿತಗೊಂಡಿದ್ದು, ಈಗಾಗಲೇ ಬಿತ್ತನೆ ಮಾಡಿದ್ದ ಬೆಳೆಗಳು ಸಹ ಒಣಗಿ ಹೋಗಿವೆ. ಈ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಅಧಿಕಾರಿಗಳೊಂದಿಗೆ ದೇವರಹಿಪ್ಪರಗಿ ತಾಲೂಕಿನ ಪಟ್ಟಣದ ಆವುಗೇಶ್ವರ ತಪೋಧಾಮ ಪರದೇಶಿಮಠದ ಕೃಷಿ ಜಮೀನು ಸೇರಿದಂತೆ ಸುತ್ತಮುತ್ತಲಿನ ರೈತರ ಹೊಲಗಳಿಗೆ ಭೇಟಿ ನೀಡಿ ಬೆಳೆ ಹಾನಿಯನ್ನು ಸ್ಥಳದಲ್ಲೇ ಪರಿಶೀಲಿಸಿದರು.

ಹೊಲಗಳಲ್ಲಿ ಒಣಗಿ ನಿಂತಿರುವ ಬೆಳೆಗಳನ್ನು ವೀಕ್ಷಿಸಿದ ಜಿಲ್ಲಾಧಿಕಾರಿಗಳು ರೈತರೊಂದಿಗೆ ನೇರವಾಗಿ ಸಂವಾದ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಿದರು. ಮಳೆಯ ಕೊರತೆಯಿಂದ ಎದುರಾಗಿರುವ ಸಂಕಷ್ಟ, ಬೆಳೆ ನಷ್ಟ, ಕುಡಿಯುವ ನೀರಿನ ಸಮಸ್ಯೆ, ಜಾನುವಾರುಗಳಿಗೆ ಮೇವು ಮತ್ತು ನೀರಿನ ಕೊರತೆ ಸೇರಿದಂತೆ ವಿವಿಧ ವಿಷಯಗಳ ಕು–ರಿತು ರೈತರು ಹಾಗೂ ಕೃಷಿ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳಿಂದ ಸಮಗ್ರ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಆವುಗೇಶ್ವರ ತಪೋಧಾಮ ಪರದೇಶಿಮಠದ ಪೂಜ್ಯ ಶ್ರೀ ಶಿವಯೋಗಿ ಮಹಾಸ್ವಾಮೀಜಿ ಮಾತನಾಡಿ, ಈ ವರ್ಷ ಜಿಲ್ಲೆಯಲ್ಲಿ ಸಮರ್ಪಕ ಮಳೆಯೇ ಆಗಿಲ್ಲ. ರೈತರು ಉತ್ತಮ ಮಳೆಯ ನಿರೀಕ್ಷೆಯಲ್ಲಿ ಬೀಜ, ಗೊಬ್ಬರ ಹಾಗೂ ಕೃಷಿ ಪರಿಕರಗಳನ್ನು ಖರೀದಿಸಿ ಸಿದ್ಧರಾಗಿದ್ದರೂ ಮಳೆ ಕೈಕೊಟ್ಟ ಕಾರಣ ಕೃಷಿ ಚಟುವಟಿಕೆ ಸಂಪೂರ್ಣವಾಗಿ ಕುಂಠಿತಗೊಂಡಿದೆ. ಹಲವಾರು ರೈತರು ಸಾಲ ಮಾಡಿ ಕೃಷಿಗೆ ಸಿದ್ಧತೆ ನಡೆಸಿದ್ದರೂ ಬೆಳೆ ಬೆಳೆಯದೇ ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

"ಜಿಲ್ಲೆಯಲ್ಲಿ ಸುಮಾರು ಶೇಕಡಾ 10ರಷ್ಟು ಪ್ರದೇಶದಲ್ಲೂ ಬಿತ್ತನೆ ನಡೆಯಲು ಸಾಧ್ಯವಾಗಿಲ್ಲ. ಅನೇಕ ರೈತರು ಖರೀದಿಸಿದ ಬೀಜ ಮತ್ತು ಗೊಬ್ಬರವನ್ನು ಮನೆಯಲ್ಲಿಯೇ ಇಟ್ಟುಕೊಂಡಿದ್ದಾರೆ. ಹೊಲಗಳಲ್ಲಿ ತೇವಾಂಶವೇ ಇಲ್ಲದ ಕಾರಣ ಬಿತ್ತನೆ ಮಾಡಲು ಸಾಧ್ಯವಾಗಿಲ್ಲ. ಈಗಲೇ ಮಳೆ ಬಂದರೂ ಮುಂಗಾರು ಹಂಗಾಮಿನ ಬೆಳೆಗಳನ್ನು ಬೆಳೆಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ಈಗಾಗಲೇ ಮುಂಗಾರು ಕೃಷಿ ಸಂಪೂರ್ಣವಾಗಿ ಹಾನಿಗೊಳಗಾಗಿದೆ. ಆದ್ದರಿಂದ ಸರ್ಕಾರ ಯಾವುದೇ ವಿಳಂಬ ಮಾಡದೆ ತಕ್ಷಣ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರಿಗೆ ಬೆಳೆ ಪರಿಹಾರ ಹಾಗೂ ಬರ ಪರಿಹಾರ ನೀಡಬೇಕು" ಎಂದು ರೈತರ ಪರವಾಗಿ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ರೈತರು ಕೂಡ ಜಿಲ್ಲಾಧಿಕಾರಿಗಳ ಮುಂದೆ ತಮ್ಮ ಅಳಲು ತೋಡಿಕೊಂಡು, ಕೃಷಿಗಾಗಿ ಮಾಡಿದ ಹೂಡಿಕೆ ಸಂಪೂರ್ಣವಾಗಿ ನೀರಿನಲ್ಲಿ ಹೋಮವಾದಂತಾಗಿದೆ. ಸಾಲದ ಹೊರೆಯಿಂದ ಕುಟುಂಬ ನಿರ್ವಹಣೆಯೂ ಕಷ್ಟಕರವಾಗಿದೆ. ಬೆಳೆ ನಷ್ಟದಿಂದ ಮುಂದಿನ ಕೃಷಿಗೂ ಹಣದ ಕೊರತೆ ಎದುರಾಗಿದ್ದು, ಸರ್ಕಾರ ತಕ್ಷಣ ಮಧ್ಯಪ್ರವೇಶಿಸಿ ಪರಿಹಾರ ಘೋಷಿಸಬೇಕು ಎಂದು ಒತ್ತಾಯಿಸಿದರು.

ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿ ಡಾ. ಆನಂದ ಕೆ., ರೈತರ ಸಂಕಷ್ಟವನ್ನು ಸರ್ಕಾರದ ಗಮನಕ್ಕೆ ತರುವ ನಿಟ್ಟಿನಲ್ಲಿ ಜಿಲ್ಲಾದ್ಯಂತ ಸ್ವತಃ ಬೆಳೆ ಹಾನಿ ಪರಿಶೀಲನೆ ನಡೆಸುತ್ತಿರುವುದಾಗಿ ತಿಳಿಸಿದರು. "ನಾನು ಖುದ್ದಾಗಿ ಹಲವು ತಾಲೂಕುಗಳಲ್ಲಿ ಸಂಚರಿಸಿ ಬೆಳೆ ಪರಿಸ್ಥಿತಿಯನ್ನು ಪರಿಶೀಲಿಸಿದ್ದೇನೆ. ಪ್ರತಿಯೊಂದು ಗ್ರಾಮದಲ್ಲೂ ರೈತರ ಸಮಸ್ಯೆಗಳನ್ನು ಆಲಿಸುತ್ತಿದ್ದೇನೆ. ಅಧಿಕಾರಿಗಳಿಂದ ವರದಿಗಳನ್ನು ಮಾತ್ರ ಪಡೆದುಕೊಳ್ಳದೆ ನೈಜ ಪರಿಸ್ಥಿತಿಯನ್ನು ಅರಿಯುವ ಉದ್ದೇಶದಿಂದಲೇ ಸ್ಥಳಕ್ಕೆ ಭೇಟಿ ನೀಡಿದ್ದೇನೆ" ಎಂದು ಹೇಳಿದರು.

ಜಿಲ್ಲೆಯ ವಿವಿಧ ಭಾಗಗಳಿಂದ ಸಂಗ್ರಹವಾಗುತ್ತಿರುವ ಮಾಹಿತಿ, ಕೃಷಿ ಇಲಾಖೆ ಹಾಗೂ ಕಂದಾಯ ಇಲಾಖೆಯ ಸಮೀಕ್ಷೆಗಳನ್ನು ಒಟ್ಟುಗೂಡಿಸಿ ಸಮಗ್ರ ವರದಿ ಸಿದ್ಧಪಡಿಸಲಾಗುವುದು. ಬಳಿಕ ಸರ್ಕಾರಕ್ಕೆ ನಿಖರ ಮಾಹಿತಿಯನ್ನು ಸಲ್ಲಿಸಿ ರೈತರಿಗೆ ಸಾಧ್ಯವಾದಷ್ಟು ನೆರವು ದೊರಕುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಬೆಳೆ ಹಾನಿ, ಬಿತ್ತನೆ ಪ್ರಮಾಣ, ಮಳೆಯ ಕೊರತೆ ಹಾಗೂ ಜಾನುವಾರುಗಳ ಸ್ಥಿತಿಗತಿ ಸೇರಿದಂತೆ ಎಲ್ಲ ಅಂಶಗಳನ್ನು ವರದಿಯಲ್ಲಿ ಸೇರಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾಧಿಕಾರಿಗಳೊಂದಿಗೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ, ಡಿಡಿಎ ಚಂದ್ರಕಾಂತ ಪವಾರ, ಎಡಿಎ ಪ್ರಶಾಂತ ಸಾಣಿ, ದೇವರಹಿಪ್ಪರಗಿ ತಹಸೀಲ್ದಾರ್ ನಿಂಗಣ್ಣ ಬಿರಾದಾರ, ಕಂದಾಯ ಇಲಾಖೆ ಅಧಿಕಾರಿ ರಮಾನಂದ ಚಕಡಿ, ರೈತರಾದ ಸತೀಶ ಪರದೇಶಿಮಠ, ಮುರುಗೇಂದ್ರಯ್ಯ ಇಂಡಿ, ಸಂಗಮೇಶ್, ಮಸಬಿನಾಳ ವೀರಭದ್ರಯ್ಯ ಇಂಡಿ, ಲಕ್ಷ್ಮಣ್ ವಡ್ಡರ್ ಸೇ–ರಿದಂತೆ ಹಲವರು ಉಪಸ್ಥಿತರಿದ್ದರು. ಪರಿಶೀಲನೆ ವೇಳೆ ಅಧಿಕಾರಿಗಳು ಬೆಳೆ ಹಾನಿಯ ಕುರಿತು ವಿವರ ನೀಡಿದರೆ, ರೈತರು ಸರ್ಕಾರದಿಂದ ಶೀಘ್ರ ಪರಿಹಾರ ಘೋಷಿಸುವಂತೆ ಮತ್ತೊಮ್ಮೆ ಆಗ್ರಹಿಸಿದರು.

# ಹೊರರಾಜ್ಯ ಕಾರ್ಮಿಕರಿಂದ ಸ್ಥಳೀಯರ ಉದ್ಯೋಗಕ್ಕೆ ಹೊಡೆತ: ಸರ್ಕಾರಕ್ಕೆ ಕಾರ್ಮಿಕರ ಎಚ್ಚರಿಕೆ



**ಮಾಗಡಿ:** ಹೊರರಾಜ್ಯಗಳಿಂದ ಆಗಮಿಸಿರುವ ಅಗ್ಗದ ಕೂಲಿ ಕಾರ್ಮಿಕರ ಸಂಖ್ಯೆ ಹೆಚ್ಚುತ್ತಿರುವುದರಿಂದ ಸ್ಥಳೀಯ ಕಟ್ಟಡ ಕಾರ್ಮಿಕರು, ಮೇಸಿಗಳು ಹಾಗೂ ಪೇಂಟರ್‌ಗಳ ಜೀವನೋಪಾಯಕ್ಕೆ ತೀವ್ರ ಹೊಡೆತ ಬೀಳುತ್ತಿದೆ. ಸರ್ಕಾರ ಸ್ಥಳೀಯ ಕಾರ್ಮಿಕರ ಹಿತಾಸಕ್ತಿಯನ್ನು ಕಾಪಾಡಲು ಅಗತ್ಯ ಕ್ರಮ ಕೈಗೊಂಡು ಹೊರರಾಜ್ಯದ ಕಾರ್ಮಿಕರ ನಿಯಂತ್ರಣಕ್ಕೆ ಸೂಕ್ತ ನೀತಿ ರೂಪಿಸಬೇಕು ಎಂದು ರಾಜ್ಯ ಕಟ್ಟಡ ಮತ್ತು ಅಸಂಘಟಿತ ಕಾರ್ಮಿಕ ಒಕ್ಕೂಟದ ಅಧ್ಯಕ್ಷ ಡಾ. ಪ್ರಸನ್ನಗೌಡ ಆಗ್ರಹಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ರಾಜ್ಯ ಕಟ್ಟಡ ಮತ್ತು ಅಸಂಘಟಿತ ಕಾರ್ಮಿಕ ಒಕ್ಕೂಟ ಹಾಗೂ ಶ್ರೀರಂಗ ಪೇಂಟರ್ಸ್ ಕ್ಷೇಮಾಭಿವೃದ್ಧಿ ಸಂಘ ಸಂಯುಕ್ತವಾಗಿ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, ಸ್ಥಳೀಯ ಕಾರ್ಮಿಕರು ಹಲವು ವರ್ಷಗಳಿಂದ ಕಟ್ಟಡ ನಿರ್ಮಾಣ ಕ್ಷೇತ್ರದಲ್ಲಿ ಶ್ರಮಿಸುತ್ತಿದ್ದರೂ, ಹೊರರಾಜ್ಯಗಳಿಂದ ದೊಡ್ಡ ಸಂಖ್ಯೆಯಲ್ಲಿ ಕಾರ್ಮಿಕರು ಆಗಮಿಸುತ್ತಿರುವುದರಿಂದ ಅವರಿಗೆ ಉದ್ಯೋಗದ ಅವಕಾಶಗಳು ಕಡಿಮೆಯಾಗುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು.

ಹೊರರಾಜ್ಯದ ಕಾರ್ಮಿಕರು ಕಡಿಮೆ ಕೂಲಿಗೆ ಕೆಲಸ ಮಾಡುತ್ತಿರುವ ಕಾರಣ ಗುತ್ತಿಗೆದಾರರು ಅವರನ್ನೇ ಹೆಚ್ಚಿನ ಸಂಖ್ಯೆಯಲ್ಲಿ ನೇಮಿಸಿಕೊಳ್ಳುತ್ತಿದ್ದಾರೆ. ಇದರ ಪರಿಣಾಮ ಸ್ಥಳೀಯ ಕಟ್ಟಡ ಕಾರ್ಮಿಕರು, ಮೇಸಿಗಳು, ಪೇಂಟರ್‌ಗಳು ಹಾಗೂ ಇತರೆ ಅಸಂಘಟಿತ ಕಾರ್ಮಿಕರಿಗೆ ಕೆಲಸ ಸಿಗದೆ ಕುಟುಂಬ ನಿರ್ವಹಣೆಯೇ ಕಷ್ಟಕರವಾಗಿದೆ. ಸ್ಥಳೀಯ ಕಾರ್ಮಿಕರ ಉದ್ಯೋಗವನ್ನು ರಕ್ಷಿಸುವುದು ಹಾಗೂ ಅವರ ಹಕ್ಕುಗಳನ್ನು ಕಾಪಾಡುವುದು ಸಂಘಟನೆಯ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಕಾರ್ಮಿಕ ಕಲ್ಯಾಣಕ್ಕಾಗಿ ಜಾರಿಯಲ್ಲಿರುವ ಹಲವು ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳುತ್ತಿಲ್ಲ ಎಂದು ಆರೋಪಿಸಿದ ಅವರು, ಕಾರ್ಮಿಕರ ಮಕ್ಕಳಿಗೆ ನೀಡಬೇಕಾದ ವಿದ್ಯಾರ್ಥಿವೇತನವನ್ನು ತಡೆಹಿಡಿಯಲಾಗಿದೆ. ಇದರಿಂದ ಬಡ ಕಾರ್ಮಿಕರ ಮಕ್ಕಳ ಶಿಕ್ಷಣದ ಮೇಲೆ ದುಷ್ಪರಿಣಾಮ ಉಂಟಾಗಿದೆ. ವಿದ್ಯಾರ್ಥಿವೇತನವನ್ನು ತಕ್ಷಣ ಬಿಡುಗಡೆ ಮಾಡಿ ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಇದೇ ವೇಳೆ ಕಾರ್ಮಿಕ ಇಲಾಖೆಯಿಂದ ವಿತ–ರಿಸಲಾಗುತ್ತಿರುವ ಟೂಲ್ ಕಿಟ್‌ಗಳ ಗುಣಮಟ್ಟ ಅತ್ಯಂತ ಕಳಪೆಯಾಗಿದೆ ಎಂದು ಆರೋಪಿಸಿದ ಅವರು, ಸರ್ಕಾರ ಕೋಟ್ಯಂತರ ರೂಪಾಯಿ ವೆಚ್ಚ ಮಾಡುತ್ತಿದ್ದರೂ ಕಾರ್ಮಿಕರಿಗೆ ಕಡಿಮೆ ಗುಣಮಟ್ಟದ ಉಪಕರಣಗಳನ್ನು ವಿತರಿಸಲಾಗುತ್ತಿದೆ. ಇದರಲ್ಲಿ ಭಾರೀ ಅವ್ಯವಹಾರ ನಡೆದಿರುವ ಅನುಮಾನವಿದ್ದು, ಟೂಲ್ ಕಿಟ್ ಖರೀದಿ ಹಾಗೂ ವಿತರಣೆಯ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಹೊರರಾಜ್ಯಗಳಿಂದ ಬಂದಿರುವ ಕಾರ್ಮಿಕರು 300ರಿಂದ 400 ಕೂಲಿಗೆ ಕೆಲಸ ಮಾಡುತ್ತಿರುವುದರಿಂದ ಸ್ಥಳೀಯ ಕಾರ್ಮಿಕರಿಗೆ ಯೋಗ್ಯ ಕೂಲಿ ಸಿಗುತ್ತಿಲ್ಲ. ಗುತ್ತಿಗೆದಾರರು ಕಡಿಮೆ ವೆಚ್ಚಕ್ಕಾಗಿ ಹೊರರಾಜ್ಯದ ಕಾರ್ಮಿಕರಿಗೆ ಆದ್ಯತೆ ನೀಡುತ್ತಿರುವುದು ಸ್ಥಳೀಯ ಕಾರ್ಮಿಕರ ಬದುಕಿಗೆ ದೊಡ್ಡ ಸವಾಲಾಗಿದೆ. ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಸ್ಥಳೀಯ ಕಾರ್ಮಿಕರಿಗೆ ಉದ್ಯೋಗದಲ್ಲಿ ಆದ್ಯತೆ ನೀಡುವ ನೀತಿಯನ್ನು ಜಾರಿಗೊಳಿಸಬೇಕು ಎಂದು ಡಾ. ಪ್ರಸನ್ನಗೌಡ ಒತ್ತಾಯಿಸಿದರು.

ಮಾಗಡಿ ತಾಲೂಕಿನಲ್ಲೇ ಸುಮಾರು 10 ಸಾವಿರ ಸ್ಥಳೀಯ ಕಟ್ಟಡ ಕಾರ್ಮಿಕರು ಹಾಗೂ 1,500ಕ್ಕೂ ಹೆಚ್ಚು ಮೇಸಿಗಳು ಜೀವನ ಸಾಗಿಸುತ್ತಿದ್ದಾರೆ. ಇವರ ಕುಟುಂಬಗಳು ಸಂಪೂರ್ಣವಾಗಿ ಕಟ್ಟಡ ನಿರ್ಮಾಣ ಕ್ಷೇತ್ರವನ್ನೇ ಅವಲಂಬಿಸಿವೆ. ಹೊರರಾಜ್ಯದ ಕಾರ್ಮಿಕರ ಹೆಚ್ಚಳದಿಂದ ಈ ಸಾವಿರಾರು ಕುಟುಂಬಗಳ ಜೀವನೋಪಾಯವೇ ಸಂಕಷ್ಟಕ್ಕೆ ಸಿಲುಕಿದೆ. ಇವರ ಹಕ್ಕುಗಳನ್ನು ರಕ್ಷಿಸಲು ಸಂಘಟನೆ ನಿರಂತರ ಹೋರಾಟ ನಡೆಸಲಿದೆ ಎಂದು ಅವರು ಹೇಳಿದರು.

ಶ್ರೀರಂಗ ಪೇಂಟರ್ಸ್ ಕ್ಷೇಮಾಭಿವೃದ್ಧಿ ಸಂಘದ ತಾಲೂಕು ಅಧ್ಯಕ್ಷ ಲಕ್ಷ್ಮೀನರಸಿಂಹ ಮಾತನಾಡಿ, ನೆರೆ ರಾಜ್ಯಗಳಿಂದ ಆಗಮಿಸುತ್ತಿರುವ ಅಗ್ಗದ ಕೂಲಿ ಕಾರ್ಮಿಕರ ಕಾರಣ ರಾಜ್ಯದ ಕಟ್ಟಡ ಪೇಂಟರ್‌ಗಳು ಕೆಲಸ ಕಳೆದುಕೊಳ್ಳುತ್ತಿದ್ದಾರೆ. ಹಿಂದೆ ನಿರಂತರವಾಗಿ ಕೆಲಸ ಸಿಗುತ್ತಿದ್ದರೂ ಈಗ ವಾರದಲ್ಲಿ ಕೆಲವೇ ದಿನಗಳು ಕೆಲಸ ಸಿಗುವಂತಾಗಿದೆ. ದುಡಿದರೂ ಕುಟುಂಬ ನಿರ್ವಹಣೆ, ಮಕ್ಕಳ ಶಿಕ್ಷಣ ಹಾಗೂ ದಿನನಿತ್ಯದ ಖರ್ಚುಗಳನ್ನು ಭರಿಸಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಸರ್ಕಾರ ತಕ್ಷಣವೇ ಸ್ಥಳೀಯ ಕಾರ್ಮಿಕರ ರಕ್ಷಣೆಗೆ ಕ್ರಮ ಕೈಗೊಳ್ಳಬೇಕು. ಉದ್ಯೋಗದಲ್ಲಿ ಸ್ಥಳೀಯರಿಗೆ ಆದ್ಯತೆ ನೀಡುವ ವ್ಯವಸ್ಥೆ ರೂಪಿಸಬೇಕು ಹಾಗೂ ಕಾರ್ಮಿಕ ಕಲ್ಯಾಣ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು. ಇಲ್ಲವಾದರೆ ಸಾವಿರಾರು ಕಾರ್ಮಿಕ ಕುಟುಂಬಗಳು ಬೀದಿಗೆ ಬೀಳುವ ಪರಿಸ್ಥಿತಿ ಎದುರಾಗಲಿದೆ. ಸರ್ಕಾರ ನಮ್ಮ ಅಳಲಿಗೆ ಸ್ಪಂದಿಸದಿದ್ದರೆ ಸಾಮೂಹಿಕ ಆತ್ಮಹತ್ಯೆಯಂತಹ ತೀವ್ರ ನಿರ್ಧಾರ ತೆಗೆದುಕೊಳ್ಳುವ ಪರಿಸ್ಥಿತಿ ಎದುರಾಗಬಹುದು ಎಂದು ಅವರು ಎಚ್ಚರಿಕೆ ನೀಡಿದರು.

ಸಭೆಯಲ್ಲಿ ತಾಲೂಕು ಕಾರ್ಮಿಕರ ಒಕ್ಕೂಟದ ಅಧ್ಯಕ್ಷ ವೆಂಕಟೇಶ್, ಉಪಾಧ್ಯಕ್ಷ ಗಿರೀಶ್, ಪ್ರಧಾನ ಕಾರ್ಯದರ್ಶಿ ನರಸಿಂಹಮೂರ್ತಿ, ಕಾರ್ಯದರ್ಶಿ ಅನಿಲ್, ಸಂಘಟನಾ ಕಾರ್ಯದರ್ಶಿ ಮಂಜುನಾಥ್, ಖಜಾಂಚಿ ಚಿಕ್ಕನರಸಪ್ಪ, ನಿರ್ದೇಶಕರಾದ ರೇವಣ್ಣ ಸಿದ್ದಪ್ಪ, ಫಾರೂಕ್, ನರಸಿಂಹರಾಜು, ರಂಗನಾಥ್, ಗಣೇಶ್, ನಾರಾಯಣ, ಸತೀಶ್, ರಾಜು, ಕೇಶವ, ರಘು, ರವಿ, ರವಿಕುಮಾರ್ ಸೇರಿದಂತೆ ಹಲವಾರು ಕಟ್ಟಡ ಕಾರ್ಮಿಕರು, ಪೇಂಟರ್‌ಗಳು ಹಾಗೂ ಸಂಘಟನೆಯ ಪದಾಧಿಕಾ–ರಿಗಳು ಉಪಸ್ಥಿತರಿದ್ದರು. ಸಭೆಯಲ್ಲಿ ಸ್ಥಳೀಯ ಕಾರ್ಮಿಕರ ಹಿತಾಸಕ್ತಿ ಕಾಪಾಡಲು ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವ ಬಗ್ಗೆ ಚರ್ಚಿಸಿ, ಸರ್ಕಾರಕ್ಕೆ ವಿವಿಧ ಬೇಡಿಕೆಗಳನ್ನು ಸಲ್ಲಿಸುವ ನಿರ್ಧಾರ ಕೈಗೊಳ್ಳಲಾಯಿತು.

## ಜ್ಞಾನದ ಬೆಳಕು ತೋರುವ ಗುರುಗಳಿಗೆ ಕೃತಜ್ಞತೆ ಸಲ್ಲಿಸುವ ಪವಿತ್ರದಿನ: ಸಪ್ತಗಿರಿ ಆನಂದ್



**ಬೆಂಗಳೂರು:** ಗುರು ಪೂರ್ಣಿಮೆಯು ನಮ್ಮ ಜೀವನದಲ್ಲಿ ಅಜ್ಞಾನದ ಕತ್ತಲನ್ನು ಹೊಡೆದೋಡಿಸಿ ಜ್ಞಾನದ ಬೆಳಕು ತೋರುವ ಗುರುಗಳಿಗೆ ಕೃತಜ್ಞತೆ ಸಲ್ಲಿಸುವ ಅತ್ಯಂತ ಪವಿತ್ರವಾದ ದಿನವಾಗಿದೆ. ಎಂದು ಸುಂಕದಕಟ್ಟೆ ವಾರ್ಡ್ ಬಿಜೆಪಿ ಅಧ್ಯಕ್ಷ ಸಪ್ತಗಿರಿ ಆನಂದ್ ತಿಳಿಸಿದರು.

ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಸುಂಕದಕಟ್ಟೆ ವಾರ್ಡ್ ಬಿಜೆಪಿ ಅಧ್ಯಕ್ಷ ಸಪ್ತಗಿರಿ ಅನಂದ್ ಹಾಗೂ ಧರ್ಮಪತ್ನಿ ಜಿಬಿಎ ಆಕಾಂಕ್ಷಿ ಹೆಚ್ ಪಿ ಕುಮಾರಿ ರವರೊಂದಿಗೆ ಗುರುಪೂರ್ಣಮಿ ಅಂಗವಾಗಿ ವಿವಿಧ ಸಾಯಿಬಾಬಾ ಮಂದಿರಗಳಿಗೆ ತೆರಳಿ ದೇವರ ದರ್ಶನ ಪಡೆದರು.

ಈ ಶುಭ ದಿನದಂದು ಎಲ್ಲಾ ಭಕ್ತರು ತಮ್ಮ ಗುರುಗಳನ್ನು, ಮಾರ್ಗದರ್ಶಕರನ್ನು, ಹಿರಿಯರನ್ನು ಮತ್ತು ದೇವರನ್ನು ಪೂಜಿಸಿ ಅವರ ಅರ್ಶಿವಾದ ಪಡೆಯತ್ತಾರೆ ಎಂದರು.

## ಪತ್ನಿ ಕೊಂದು ಬೆಡ್‌ಶೀಟ್‌ನಲ್ಲಿ ಸುತ್ತಿಟ್ಟು ಪರಾರಿಯಾದ ಪತಿ

**ಬೆಂಗಳೂರು:** ಮದುವೆಯಾಗಿ ಕೇವಲ ಮೂರು ತಿಂಗಳಲ್ಲೇ ಪತ್ನಿಯನ್ನು ಕೊಲೆ ಮಾಡಿ, ಮೃತದೇಹವನ್ನು ಬೆಡ್‌ಶೀಟ್‌ನಲ್ಲಿ ಸುತ್ತಿಟ್ಟು ಮನೆಗೆ ಬೀಗ ಹಾಕಿ ಪರಾ–ರಿಯಾದ ಘಟನೆ ಬೆಂಗಳೂರಿನ ಕುಂಬಳಗೋಡು ಸಮೀಪದ ಗೇರು ಪಾಳ್ಯದಲ್ಲಿ ನಡೆದಿದೆ.

ಮೃತ ಮಹಿಳೆಯನ್ನು ಬಿಹಾರ ಮೂಲದ ರಿಯಾ ಕುಮಾರಿ ಎಂದು ಗುರುತಿಸಲಾಗಿದೆ. ಆರೋಪಿ ಪತಿ ಧೀರಜ್ ಕುಮಾರ್ ತಲೆಮರೆಸಿಕೊಂಡಿದ್ದು, ಪೊಲೀಸರು ಆತನ ಪತ್ತೆಗೆ ಬಲೆ ಬೀಸಿದ್ದಾರೆ.

ನಾಲ್ಕು ತಿಂಗಳ ಹಿಂದೆ ದಂಪತಿ ಬಿಹಾರದಿಂದ ಬೆಂಗಳೂರಿಗೆ ಬಂದು ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು. ರಿಯಾ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರೆ, ಧೀರಜ್ ಸಣ್ಣಪುಟ್ಟ ಕೆಲಸ ಮಾಡುತ್ತಿದ್ದ. ಕಳೆದ ಕೆಲವು ದಿನಗಳಿಂದ ದಂಪತಿ ನಡುವೆ ಆಗಾಗ ಜಗಳ ನಡೆಯುತ್ತಿತ್ತು ಎಂದು ತಿಳಿದುಬಂದಿದೆ.

ಜಗಳದ ವೇಳೆ ಧೀರಜ್ ಪತ್ನಿಯನ್ನು ಕೊಲೆ ಮಾಡಿ, ಮೃತದೇಹವನ್ನು ಬೆಡ್‌ಶೀಟ್‌ನಲ್ಲಿ ಸುತ್ತಿ ಮನೆಯಲ್ಲೇ ಬಿಟ್ಟು ಪರಾರಿಯಾಗಿದ್ದಾನೆ ಎಂಬ ಆರೋಪ ಕೇಳಿಬಂದಿದೆ. ರಿಯಾ ಸ್ನೇಹಿತೆ ಹಲವು ಬಾರಿ ಕರೆ ಮಾಡಿದರೂ ಪ್ರತಿಕ್ರಿಯೆ ಸಿಗದ ಹಿನ್ನೆಲೆಯಲ್ಲಿ ಮನೆಗೆ ಬಂದಾಗ ಕಿಟಕಿ ಬಳಿ ನೊಣಗಳು ಹಾಗೂ ದುರ್ವಾಸನೆ ಕಂಡು ಅನುಮಾನಗೊಂಡು ಮನೆ ಮಾಲೀಕರಿಗೆ ಮಾಹಿತಿ ನೀಡಿದ್ದಾಳೆ. ಬಳಿಕ ಬಾಗಿಲು ತೆರೆದು ನೋಡಿದಾಗ ಮೃತದೇಹ ಪತ್ತೆಯಾಗಿದೆ.

ಮಾಹಿತಿ ತಿಳಿದು ಕುಂಬಳಗೋಡು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಆರ್.ಆರ್.ನಗರ ಆಸ್ಪತ್ರೆಗೆ ರವಾನಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಪರಾರಿ ಯಾಗಿರುವ ಧೀರಜ್ ಕುಮಾರ್‌ನ ಬಂಧನಕ್ಕೆ ಹುಡುಕಾಟ ಮುಂದುವರಿಸಿದ್ದಾರೆ.